ಕ.ವಿ.ಮಂ. ಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳು ಬಳಂಬವಾಗುತ್ತಿರುವುದು

506 (1064). ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ):-ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದ ವಿದ್ಯುಚ್ಛಕ್ತಿ ಮಂಡಳಿಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳು ಇತ್ಯರ್ಥವಾಗುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಸರ್ಕಾರದ ನೀತಿಗೂ ವಿದ್ಯುಚ್ಛಕ್ತಿ ಮಂಡಳಿ ನಿಯಮಗಳಿಗೂ ವ್ಯತ್ಯಾಸ ಇರುವುದೇ ಆಗಿದ್ದಲ್ಲಿ ಅವುಗಳನ್ನು ಸರಿಪಡಿಸಲು ಸಾಧ್ಯವಿಲ್ಲವೇ?

ಇ) ಈ ದಿಶೆಯಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ.

ಈ) ಜನರ ಸಮಸ್ಯೆ ಮತ್ತು ನಿಯಮಗಳನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು):-

ಅ) ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳು ಸಾಧ್ಯವಾದಷ್ಟು ಮಟ್ಟಿಗೆ ತ್ವರಿತವಾಗಿ ಇತ್ಯರ್ಥ ಗೊಳಿಸಲಾಗುತ್ತಿದೆ.

ಆ) ಮಂಡಳಿಯ ನಿಯಮಗಳು ಸರ್ಕಾರದ ನೀತಿಗೆ ಅನುಗುಣವಾಗಿರುವುದರಿಂದ ಯಾವುದೇ ವ್ಯತ್ಯಾಸ ಕಂಡು ಬರುವುದಿಲ್ಲ.

ಇ) 'ಅ' ಮತ್ತು 'ಈ' ಇಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಸಾಧ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಬೆಂಗಳೂರು ನಗರಸಾರಿಗೆ ಯಿಂದ ಕೆ.ಎಸ್.ಆರ್.ಟಿ.ಸಿ.ಗೆ ಆಗುತ್ತಿರುವ ನಷ್ಟದ ಪ್ರಮಾಣ

508 (1087). ಶ್ರೀ ವಿಜಯಕುಮಾರ್ ಶೆಟ್ಟಿ (ಸುರತ್ಕಲ್):- ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಬೆಂಗಳೂರು ನಗರ ಸಾರಿಗೆ (ಬಿ.ಟಿ.ಎಸ್) ಯಿಂದ ಕ.ರಾ.ರ.ಸಾ.ಸಂಸ್ಥೆಗೆ ಆಗುತ್ತಿರುವ ನಷ್ಟದ ಪ್ರಮಾಣವೆಷ್ಟು?

ಆ) ಬೆಂಗಳೂರು ನಗರ ಸಾರಿಗೆಯನ್ನು ಖಾಸಗೀಕರಣಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ?

ಇ) ಮೇಲ್ಕಂಡ ವಿಚಾರದಲ್ಲಿ ಸರ್ಕಾರದ ನಿರ್ದಿಷ್ಟ ನಿಲುವೇನು?

ಶ್ರೀ ಅಜೀಜ್ ಸೇಠ್ (ಸಾರಿಗೆ ಸಚಿವರು):-

ಅ) ಎಪ್ರಿಲ್ 1991 ರಿಂದ ಜನವರಿ 1992 ರವರೆಗೆ ಬೆಂಗಳೂರು ನಗರಸಾರಿಗೆ ವಿಭಾಗವು 19.92 ಕೋಟಿ ರೂ.ಗಳಷ್ಟು ನಷ್ಟವನ್ನು ಅನುಭವಿಸಿದೆ.

ಆ) ಬೆಂಗಳೂರು ನಗರ ಸಾರಿಗೆ ಸಂಬಂಧಿಸಿದಂತೆ ಪ್ರಸ್ತಾವನೆಯು ಪರಿಶೀಲನೆಯಲ್ಲಿ ಇರುತ್ತದೆ.

ಇ) ಈ ಹಂತದಲ್ಲಿ ಉದ್ಭವಿಸುವುದಿಲ್ಲ.